**All India Radio: Bangalore**
**Regional Bulletin In Kannada**
**08.09.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

೧. ಅತಿವೃಷ್ಟಿಯಿಂದ ಹಾನಿಯ ಪರಿಹಾರ ತಕ್ಷಣವೇ ಒದಗಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

೨. ಮಂಡ್ಯದ ಮದ್ದೂರಿನಲ್ಲಿ ಪರಿಸ್ಥಿತಿ ನಿಯಂತ್ರಣ; ನಿಷೇಧಾಜ್ಞೆ ಜಾರಿ

೩. ಮದ್ದೂರು ಪ್ರಕರಣ; ಸರ್ಕಾರದ ವಿರುದ್ಧ ಬಿಜೆಪಿ ಅಸಮಾಧಾನ

೪. ಉಪರಾಷ್ಟ್ರಪತಿ ಹುದ್ದೆಗೆ ನಾಳೆ ಚುನಾವಣೆ; ಸಂಸದರಿಗಾಗಿ ತರಬೇತಿ ಹಾಗೂ ಅಣಕು ಮತದಾನ ವ್ಯವಸ್ಥೆ

>><><><><><<

೨೦೨೫ರ ಮುಂಗಾರು ಅವಧಿಯಲ್ಲಿ ರಾಜ್ಯದಲ್ಲಿ ಅತಿವೃಷ್ಟಿಯಿಂದ ಉಂಟಾದ ಹಾನಿ ಹಾಗೂ ತೆಗೆದುಕೊಂಡ ಕ್ರಮಗಳ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ  ಅಧ್ಯಕ್ಷತೆಯಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ಇಂದು ಸಭೆ ನಡೆಯಿತು.ಸಭೆಯಲ್ಲಿ ತುಂಗಾಭದ್ರಾ ಅಣೆಕಟ್ಟಿನ ೩೨ ಕ್ರಸ್ಟ್ ಗೇಟ್ ಬದಲಾವಣೆಗೆ ಟೆಂಡರ್ ಕರೆಯಲಾಗಿದ್ದು ೮ ಕ್ರಸ್ಟ್ ಗೇಟ್‌ಗಳು ಅಳವಡಿಕೆಗೆ ಸಿದ್ಧವಿದೆ ಎಂದು ಅಧಿಕಾರಿಗಳು ವಿವರಿಸಿದ್ದಾರೆ.ಮೊದಲ ಬೆಳೆಗೆ ನೀರು ಹರಿಸುವ ಮುನ್ನ ಅಗತ್ಯ ದುರಸ್ತಿ ಕಾರ್ಯಗಳನ್ನು ಪೂರ್ಣಗೊಳಿಸಿ ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಮಳೆ ಹಾನಿಯಿಂದ ಹಾನಿಗೀಡಾಗಿರುವ ಬೆಳೆ, ಮನೆಗಳಿಗೆ ಸೂಕ್ತ ಪರಿಹಾರವನ್ನು ತಕ್ಷಣ ಒದಗಿಸಲು ಕ್ರಮ ಕೈಗೊಳ್ಳಬೇಕು. ಬೆಳೆ ಹಾನಿ ಬಗ್ಗೆ ಜಂಟಿ ಸಮೀಕ್ಷೆ ಕಾರ್ಯ ನಡೆಯುತ್ತಿದ್ದು, ಆದಷ್ಟು ಶೀಘ್ರ ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.ಮಳೆಗೆ ಸಂಬಂಧಿಸಿದಂತೆ ಎಪ್ರಿಲ್ ತಿಂಗಳಿನಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಒಟ್ಟು ೧೧೧ ಮಂದಿ ಸಾವನ್ನಪ್ಪಿದ್ದು ಎಲ್ಲಾ ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾಗಿದ್ದು, ಒಟ್ಟು ೫ ಕೋಟಿ ೫೫ಲಕ್ಷ ರೂಪಾಯಿ ಪರಿಹಾರ ನೀಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.೬೫೧ ಮನೆಗಳು ಸಂಪೂರ್ಣ ಹಾನಿಯಾಗಿದ್ದು, ೯ ಸಾವಿರದ ೮೭ ಮನೆಗಳು ಭಾಗಶಃ ಹಾನಿಯಾಗಿವೆ. ಸಂಪೂರ್ಣ ಹಾನಿಯಾದ ೬೪೯ ಮನೆಗಳಿಗೆ ಹಾಗೂ ಭಾಗಶಃ ಹಾನಿಯಾದ ೮ಸಾವಿರದ ೬೦೮ ಮನೆಗಳಿಗೆ ಪರಿಹಾರ ಪಾವತಿಸಲಾಗಿದೆ. ಮನೆ ಹಾನಿಯಾದವರಿಗೆ ಪರಿಹಾರ ಹಾಗೂ ವಿವಿಧ ವಸತಿ

ಯೋಜನೆಗಳ ಅಡಿ ಮನೆಯನ್ನು ಸಹ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚಿಸಿದ್ದಾರೆ.

>><><><><<

ಮಂಡ್ಯ ಜಿಲ್ಲೆಯ ಮದ್ದೂರು ನಗರದಲ್ಲಿ ಕಳೆದ ರಾತ್ರಿ ಗಣೇಶಮೂರ್ತಿ ವಿಸರ್ಜನೆ ವೇಳೆ ಸಂಭವಿಸಿದ ಕಲ್ಲು ತೂರಾಟ ಹಾಗೂ ಗುಂಪು ಘರ್ಷಣೆಗೆ ಸಂಬಂಧಪಟ್ಟಂತೆ ೨೧ ಮಂದಿಯನ್ನು ಬಂಧಿಸಲಾಗಿದೆ. ಇನ್ನಷ್ಟು ಮಂದಿಯನ್ನು ವಶಕ್ಕೆ ಪಡೆಯಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿ  ಮಲ್ಲಿಕಾರ್ಜುನ ಬಾಲದಂಡಿ ಹೇಳಿದ್ದಾರೆ.ಮದ್ದೂರು ನಗರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಘಟನೆಯಲ್ಲಿ ಹಲವು ಮಂದಿ ಗಾಯಗೊಂಡಿದ್ದಾರೆ. ಮುಂಜಾಗ್ರತಾ ಕ್ರಮವಾಗಿ ಇಂದು ಬೆಳಿಗ್ಗೆ ೬ರಿಂದ ರಾತ್ರಿ ೧೨ ಗಂಟೆಯವರೆಗೆ ನಗರದಲ್ಲಿ ನಿಷೇಧಾಜ್ಞೆ ಹೊರಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ- ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ

ಈಗಾಗಲೇ ಸಾವಿರಾರು ಮಂದಿ ಪೊಲೀಸರು ನಗರದಲ್ಲಿ ಭದ್ರತೆಗಾಗಿ ನಿಯೋಜನೆ ಗೊಂಡಿದ್ದಾರೆ. ಘಟನೆ ಖಂಡಿಸಿ ಸ್ಥಳೀಯರು ಹಾಗೂ  ಸಾವಿರಾರು ಹಿಂದೂಪರ ಸಂಘಟನೆ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸುತ್ತಿದ್ದಾರೆಪರಿಸ್ಥಿತಿಯನ್ನು ಹತೋಟಿಗೆ ತರಲು ಪೊಲೀಸರು ಲಾಠಿ ಪ್ರಹಾರ ನಡೆಸಿದ್ದಾರೆ. ಇಡೀ ಮದ್ದೂರು ನಗರ ಸಂಪೂರ್ಣ ಬಂದ್ ಆಗಿದೆ.

>><><><><<

ಮದ್ದೂರು ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಅವರು, ಯಾವುದೇ ಒತ್ತಡಕ್ಕೆ ಮಣಿಯದಂತೆ ಹಾಗೂ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಮಂಡ್ಯ ಪೊಲೀಸ್ ವರಿಷ್ಠಾಧಿಕಾರಿಗೆ ಸೂಚಿಸಿದ್ದಾರೆ.

>><><><><<

ಮದ್ದೂರಿನಲ್ಲಿ ಗಣಪತಿ ವಿಸರ್ಜನೆ ಮೆರವಣಿಗೆ ವೇಳೆ ನಡೆದ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸಿ ಇಪ್ಪತ್ತೊಂದು ಜನರನ್ನು ಬಂಧಿಸಲಾಗಿದೆ ಎಂದು ಸಚಿವ ಚಲುವರಾಯಸ್ವಾಮಿ ತಿಳಿಸಿದ್ದಾರೆ. ಯಾವ ಬಿಜೆಪಿ ಕಾರ್ಯಕರ್ತರ ಮೇಲೂ ಪ್ರಕರಣ ದಾಖಲಾಗಿಲ್ಲ, ಗಲಭೆ ನಡೆದ ಕೆಲವೇ ಗಂಟೆಗಳಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

>><><><><<

ಮದ್ದೂರಿನಲ್ಲಿ ಗಣೇಶೋತ್ಸವ ಮೆರವಣಿಗೆ ವೇಳೆ ನಡೆದ ಕಲ್ಲು ತೂರಾಟದ ವಿರುದ್ಧ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರ ಮೇಲೆ ಲಾಠಿ ಚಾರ್ಜ್ ನಡೆಸಲಾಗಿದೆ ಎಂದು ಬಿಜೆಪಿ ಆರೋಪಿಸಿದೆ. ಕಲ್ಲು ತೂರಾಟ ನಡೆಸಿದವರ ವಿರುದ್ಧ ಯಾವುದೇ ಕ್ರಮ ಏಕೆ ತೆಗೆದುಕೊಂಡಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಸಾಮಾಜಿಕ ಜಾಲತಾಣದಲ್ಲಿ ಪ್ರಶ್ನಿಸಿದ್ದಾರೆ. ಇದು ಕಾಂಗ್ರೆಸ್‌ನ ಓಲೈಕೆ ರಾಜಕಾರಣ ಎಂದು ದೂರಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ಪೊಲೀಸ್ ಠಾಣೆಗಳು ಹಾಗೂ ಪೊಲೀಸರ ಮೇಲೆ ದಾಳಿ ನಡೆದರೂ ಕ್ರಮ ತೆಗೆದುಕೊಳ್ಳದ ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮುಂದಾಗುವ ಅನಾಹುತಗಳಿಗೆ ಸರ್ಕಾರವೇ ನೇರ ಹೊಣೆ ಎಂದು ದೂರಿದ್ದಾರೆ.

>><><><><<

ಉಪರಾಷ್ಟ್ರಪತಿ ಹುದ್ದೆಗೆ ನಾಳೆ ಚುನಾವಣೆ ನಡೆಯಲಿದೆ. ಎನ್‌ಡಿಎ ಅಭ್ಯರ್ಥಿಯಾಗಿ ಸಿ.ಪಿ.ರಾಧಾಕೃಷ್ಣನ್ ಹಾಗೂ ಪ್ರತಿಪಕ್ಷಗಳ ಒಕ್ಕೂಟ- ಐಎನ್‌ಡಿಐಎ ಅಭ್ಯರ್ಥಿಯಾಗಿ, ಬಿ.ಸುದರ್ಶನ ರೆಡ್ಡಿ ಸ್ಪರ್ಧಿಸಿದ್ದಾರೆ. ಬೆಳಗ್ಗೆ ೧೦ ಗಂಟೆಯಿಂದ ಸಂಜೆ ೫ರ ವರೆಗೆ ಉಭಯ ಸದನಗಳ ಸದಸ್ಯರಿಂದ ಮತದಾನ ನಡೆಯಲಿದೆ. ಬಳಿಕ ಮತ ಎಣಿಕೆ ಕಾರ್ಯ ಕೈಗೊಳ್ಳಲಾಗುತ್ತದೆ. ಪ್ರಸ್ತುತ ಸಂಸತ್ತಿನ ಉಭಯ ಸದನಗಳ ಸದಸ್ಯರ ಒಟ್ಟು ಸಂಖ್ಯೆ ೭೮೧ ಇದ್ದು. ಈ ಪೈಕಿ ಆಡಳಿತಾರೂಢ ಎನ್‌ಡಿಎ ಮೈತ್ರಿಕೂಟದಲ್ಲಿ, ೪೩೯ ಸಂಸದರಿದ್ದರೆ, ಪ್ರತಿಪಕ್ಷಗಳ ಒಕ್ಕೂಟದಲ್ಲಿ ೩೨೪ ಸದಸ್ಯರಿದ್ದಾರೆ. ಇತರೆ ಪಕ್ಷಗಳ ಸದಸ್ಯರ ಸಂಖ್ಯೆ ೧೮ ಇದೆ. ಉಪರಾಷ್ಟ್ರಪತಿ ಚುನಾವಣೆಯಲ್ಲಿ ಮತ ಚಲಾಯಿಸುವ ಬಿಜೆಪಿ ಸಂಸದರಿಗೆ, ತರಬೇತಿ ನೀಡಲಾಗಿದೆ. ಪ್ರತಿಪಕ್ಷಗಳ ಸಂಸದರಿಗಾಗಿ ಇಂದು, ಸಂಸತ್ ಭವನದ ಸೆಂಟ್ರಲ್ ಹಾಲ್‌ನಲ್ಲಿ ಅಣಕು ಮತದಾನದ ವ್ಯವಸ್ಥೆ ರೂಪಿಸಲಾಗಿದೆ.

>><><><><<

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ದೇಶಾದ್ಯಂತ ಸರಕು ಸಾಗಾಣಿಕೆ, ಜನೋಪಯೋಗಿ ವಸ್ತುಗಳು, ಅಹಾರ ಮತ್ತು ಕೃಷಿ ಉಪಕರಣಗಳು, ಆಟೋಮೋಬೈಲ್‌ಗಳ ಮೇಲಿನ ತೆರಿಗೆ ಕಡಿಮೆ ಮಾಡಿರುವುದು ಖುಷಿ ತಂದಿದೆ ಎಂದು ಪೀಣ್ಯ ಕೈಗಾರಿಕಾ ಪ್ರದೇಶದ

ನಿಕಟ ಪೂರ್ವ ಅಧ್ಯಕ್ಷ ಶಿವಕುಮಾರ್ ತಿಳಿಸಿದ್ದಾರೆ.ಕೈಗಾರಿಕಾ ವಲಯಕ್ಕೆ ಸಾಧ್ಯವಾದಷ್ಟು ತೆರಿಗೆಯಲ್ಲಿ ವಿನಾಯಿತಿ ನೀಡಲಾಗಿದೆ ಎಂದು ಆಕಾಶವಾಣಿಗೆ ಅವರುಮಾಹಿತಿ ನೀಡಿದ್ದಾರೆ.

>><><><><<

ಕರ್ನಾಟಕ ಮಹಿಳಾ ಉದ್ಯಮಿಗಳ ಅಸೋಸಿಯೇಷನ್ -ಅವೇಕ್ ರಾಜ್ಯದಲ್ಲಿ ಮಹಿಳಾ ಉದ್ಯಮಿಗಳನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡಲು ಸಾಕಷ್ಟು ಪ್ರೋತ್ಸಾಹ ನೀಡುತ್ತಿದೆ ಎಂದು ಸಂಘದ ಸದಸ್ಯೆ ರೇಣುಕಾ ಮನೋಜ್ ತಿಳಿಸಿದ್ದಾರೆ.ದಾವಣಗೆರೆಯಲ್ಲಿ ಇಂದು ಭಾರತ್ ವಿಕಾಸ ಪರಿಷತ್ ಆಯೋಜಿಸಿದ್ದ ಟೈಲರಿಂಗ್ ತರಬೇತಿ ಪಡೆದ ಮಹಿಳೆಯರಿಗೆ ಪ್ರಮಾಣ ಪತ್ರ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.ಮಹಿಳಾ ಉದ್ಯಮಿಗಳನ್ನು ಪ್ರೋತ್ಸಾಹಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಾಕಷ್ಟು ಯೋಜನೆಗಳಿದ್ದು, ಇವುಗಳ ಬಗ್ಗೆ ಅವೇಕ್ ಬೆಂಗಳೂರು ಸೇರಿದಂತೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ತಿಳುವಳಿಕೆ ಕಾರ್ಯಕ್ರಮ ಆಯೋಜಿಸಿದೆ. ಸಾಲ ಸೌಲಭ್ಯ, ಮಾರುಕಟ್ಟೆ ವಿಸ್ತರಣೆಗೆ ಅನುಕೂಲ ಕಲ್ಪಿಸಿದೆ ಎಂದು ಹೇಳಿದ್ದಾರೆ.ಆರ್ಥಿಕವಾಗಿ ಸಬಲೀಕರಣವಾಗಬೇಕಾದರೆ ಮೊದಲು ಮಹಿಳೆಯರು ಸ್ವಂತ ದುಡಿಮೆಯ ಮಾರ್ಗ ಕಂಡುಕೊಳ್ಳಬೇಕು ಎಂದು ಅವರು  ಸಲಹೆ ನೀಡಿದ್ದಾರೆ.

>><><><><<

ವಿಜಯಪುರದ ಭೂತನಾಳ ಕೆರೆಯ ಸಮೀಪ ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಟ ಮಾಡುತ್ತಿದ್ದ ಸಂದರ್ಭದಲ್ಲಿ ಆಹಾರ ಇಲಾಖೆಯ ಅಧಿಕಾರಿಗಳು  ದಾಳಿ ನಡೆಸಿ, ಅಕ್ಕಿ ವಶಕ್ಕೆ ಪಡೆದಿದ್ದಾರೆ.೭ಲಕ್ಷ ೮೩ ಸಾವಿರ ಮೌಲ್ಯದ  ೩೪೬ ಕ್ವಿಂಟಲ್ ೨೬ ಕೆಜಿ ಅಕ್ಕಿ ಹಾಗೂ ಲಾರಿ ವಶಕ್ಕೆ  ಪಡೆಯಲಾಗಿದೆ. ಶೇಖರ ಎಂಬುವರ ಮೇಲೆ ಆದರ್ಶ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಆಹಾರ ಇಲಾಖೆಯ ಉಪ ನಿರ್ದೇಶಕರಾದ ವಿನಯಕುಮಾರ ಪಾಟೀಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

>><><><><<

ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗದಿಂದ ಮನೆ-ಮನೆ  ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯವನ್ನು ಇದೇ ೨೨ರಿಂದ ಅಕ್ಟೋಬರ್ ೭ರ ವರೆಗೆ ಹಮ್ಮಿಕೊಳ್ಳಲಾಗಿದೆ. ಸಮೀಕ್ಷೆಯಲ್ಲಿ ಸುಮಾರು ೬೦ ಪ್ರಶ್ನೆಗಳಿದ್ದು, ಸಮೀಕ್ಷೆ  ಕಾರ್ಯವನ್ನು ಪಡಿತರ ಚೀಟಿ ಮತ್ತು ಆಧಾರ ಸಂಖ್ಯೆ ಆಧಾರದ ಮೇಲೆ ಕೈಗೊಳ್ಳಲಾಗುತ್ತಿದೆ.ಸಮೀಕ್ಷಾದಾರರು ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಪಡಿತರ ಚೀಟಿ, ಆಧಾರ ಕಾರ್ಡ್, ಅಥವಾ ಆಧಾರ ಕಾರ್ಡಿನ್ ಸಂಖ್ಯೆ,

ವಿಶೇಷಚೇತನರಾಗಿದ್ದಲ್ಲಿ ವಿಶೇಷಚೇತನರ ಪ್ರಮಾಣ ಪತ್ರ, ಮತದಾರರ ಗುರುತಿನ ಚೀಟಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಒದಗಿಸಬೇಕು. ಕುಟುಂಬದ ಎಲ್ಲ ಸದಸ್ಯರ ಆಧಾರ ಕಾರ್ಡ್‌ಗೆ ಲಿಂಕ್ ಆಗಿರುವ ಮೊಬೈಲ್ ನಂಬರ್‌ಗಳಿಗೆ ಓಟಿಪಿ ಬರಲಿದೆ. ಸಮೀಕ್ಷೆ ಸಂದರ್ಭದಲ್ಲಿ ಮನೆಯ ಸದಸ್ಯರು ಮನೆಯಲ್ಲಿ ಇಲ್ಲದಿದ್ದರೂ ಸದಸ್ಯರಿಗೆ ಫೋನ್ ಮಾಡಿ ಒಟಿಪಿ ಪಡೆದು ಮಾಹಿತಿ ನೀಡಬೇಕು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

>><><><><><<

ಕೋಲರ ಜಿಲ್ಲೆಯ ಬಂಗಾರಪೇಟೆ ತಾಲ್ಲೂಕಿನಲ್ಲಿ ಖಾಲಿ ಇರುವ ೧೨ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆ ಹಾಗೂ ೫೦ ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗಾಗಿ ಸ್ಥಳೀಯ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಮೀಸಲಾತಿ ಅನ್ವಯ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಅಕ್ಟೋಬರ್ ೮ ಕೊನೆಯ ದಿನಾಂಕವಾಗಿದೆ. ಅರ್ಜಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಬೇಕು.ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

>><><><><><<